**ವಿಧಾನ ಪರಿಷತ್ತು ಸದಸ್ಯರಾದ ಮಾನ್ಯ ಶ್ರೀ ಪುಟ್ಟಣ್ಣ ಇವರು**
**ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ**

**ವಿಷಯ:-**

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ 2002ರ ಮತದಾರರ ಪಟ್ಟಿಗೆ 2025ರ ಮತದಾರರ ಪಟ್ಟಿಯನ್ನು ಮ್ಯಾಪಿಂಗ್ ಮಾಡುವ ಸಂಬಂದ ಮುಖ್ಯಚುನಾವಣಾಧಿಕಾರಿಗಳ ನಿರ್ದೇಶನ ಇದೆಯೆಂದು ಹಲವಾರು ಪ್ರೌಢಶಾಲಾ ಶಿಕ್ಷಕರಿಗೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ಕಾರಣ ಕೇಳಿ ನೋಟಿಸ್ ಜಾರಿ ಮಾಡುತ್ತಿದ್ದಾರೆ. ನೋಟಿಸ್ ನೀಡಿದ 24 ಗಂಟೆಯೊಳಗೆ ಲೀಖಿತ ಸಮಜಾಯಿಷಿ ಪತ್ರ ನೀಡುವಂತೆ ಒತ್ತಾಯಿಸುತ್ತಿದ್ದಾರೆ. ಇಲ್ಲವಾದರೆ ನಿಮ್ಮ ಮೇಲೆ ಪ್ರಜಾ ಪ್ರತಿನಿಧಿ ಕಾಯ್ದೆ 1950 ಕಲಂ 32ರಡಿಯಲ್ಲಿ ಪ್ರಕರಣ ದಾಖಲಿಸಿ ಶಿಸ್ತು ಕ್ರಮ ಜರುಗಿಸುವಂತೆ ಮೇಲಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗುವುದು ಎಂದು ಹೆದರಿಸುತ್ತಿದ್ದಾರೆ. ಈಗಾಗಲೇ ಪ್ರೌಢಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರು ಜಾತಿಗಣತಿ ಸಾಮಾಜಿಕ ಶೈಕ್ಷಣಿಕ ಗಣತಿ ಮಾಡಿ ಮುಗಿಸಿದ್ದು ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪಾಠ ಮಾಡಲು ಸಮಯವೇ ಇರುವುದಿಲ್ಲ. ಈಗಾಗಲೇ ಪ್ರೌಢಶಾಲಾ ಶಿಕ್ಷಕರಿಗೆ ಶಾಲಾ ಅವಧಿಯ ಜೊತೆಗೆ ಹೆಚ್ಚುವರಿಯಾಗಿ ಬೆಳಿಗ್ಗೆ ಮತ್ತು ಸಂಜೆ ಒಂದು ಗಂಟೆ ಪಾಠ ಮಾಡಲು ವಿಶೇಷ ತರಗತಿ ನಡೆಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳು ಆದೇಶಿಸಿದ್ದಾರೆ. ಎಸ್ಎಸ್ಎಲ್ಸಿ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ತಯಾರು ಮಾಡಬೇಕಾಗಿದ್ದು ಶಿಕ್ಷಕರು ತುಂಬಾ ಕಾರ್ಯದೊತ್ತಡವನ್ನು ಅನುಭವಿಸುತ್ತಿದ್ದಾರೆ. ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪ್ರೌಢಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲ ಶಿಕ್ಷಕರುಗಳನ್ನು ಬಿಎಲ್ಓ ಕೆಲಸದಿಂದ ಕೈಬಿಟ್ಟು ಶಾಲಾ ಕೆಲಸಗಳಲ್ಲಿ ತೊಡಗಿಕೊಳ್ಳಲು ಅವಕಾಶ ಮಾಡಿಕೊಡಬೇಕೆಂದು ಒತ್ತಾಯಿಸುತ್ತಾ ಬಿ.ಎಲ್.ಓ ಕೆಲಸವನ್ನು ಬೇರೆ ಇಲಾಖೆಯ ನೌಕರರನ್ನು ನಿಯೋಜಿಸಿ ಪ್ರೌಢಶಾಲಾ ಶಿಕ್ಷಕರನ್ನು ಈ ಕೆಲಸದಿಂದ ಮುಕ್ತಗೊಳಿಸುವ ಬಗ್ಗೆ ಪ್ರಸ್ತಾಪಿಸಿರುತ್ತಾರೆ.

**ಉತ್ತರ:**

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿನ ಮತದಾರರ ಪಟ್ಟಿಯನ್ನು ಮ್ಯಾಪಿಂಗ್ ಮಾಡಲು ಶಿಕ್ಷಕರನ್ನು BLO ಗಳಾಗಿ ನಿಯೋಜಿಸಿರುತ್ತಾರೆ. ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸದರಿ ನಿಯೋಜನೆಯನ್ನು ರದ್ದುಪಡಿಸಲು ರಾಜ್ಯ ಮುಖ್ಯ ಚುನಾವಣಾಧಿಕಾರಿ, ಬೆಂಗಳೂರು ಇವರೊಂದಿಗೆ ಸಮಾಲೋಚಿಸಿ ನಿಯಮಾನುಸಾರ ಕ್ರಮ ವಹಿಸಲಾಗುವುದು.

**ಸಂಖ್ಯೆ: ಇಪಿ 398 ಎಸ್ಇಎಸ್ 2025**

**(ಎಸ್ ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**